ಕರ್ನಾಟಕ ಸರ್ಕಾರ

ಸಂ.ಡಿಟಿಇ/10/ಎಸ್‌ಸಿಹೆಚ್(1)/2018-19

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು-560 001.
ದಿ: 15-07-2019.

-:: **ಸುತ್ತೋಲೆ** ::-

**ವಿಷಯ :** ರಾಜ್ಯದ ಎಲ್ಲಾ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳ ದಾಖಲೆಗಳನ್ನು ಇ-ದೃಢೀಕರಣ (e-Attestation) ಮಾಡಲು ಅಧಿಕಾರಿಗಳನ್ನು ನೇಮಿಸಿ, ವಿವರಗಳನ್ನು ಸಲ್ಲಿಸುವ ಬಗ್ಗೆ.

**ಉಲ್ಲೇಖ :** ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ & ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಸಿಆಸುಇ(ಇ-ಆ)/153/ಅಮುಕಾ/2019, ದಿ: 11-07-2019.

-0000000-

ವಿಷಯಕ್ಕೆ ಸಂಬಂಧಿಸಿದಂತೆ, ದಿ: 14-06-2019ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು ಇವರ ಅಧ್ಯಕ್ಷತೆಯಲ್ಲಿ "ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಯೋಜನೆಗಳನ್ನು ಏಕೀಕೃತ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶ" ದಲ್ಲಿ ನಿರ್ವಹಿಸುವ ಕುರಿತು ನಡೆದ ಸಭೆಯ ಸಡವಳಗಳಲ್ಲಿ ಈ ಕೆಳಕಂಡಂತೆ ವಿವರಿಸಲಾಗಿದೆ.

**"ಶೈಕ್ಷಣಿಕ ಮಾನ ದಂಡಗಳಿಗೆ ಕೇಂದ್ರೀಕೃತ ಡೇಟಾಬೇಸ್ ಲಭ್ಯವಿರದ ಹಿನ್ನಲೆಯಲ್ಲಿ ಇ-ದೃಢೀಕರಣ (e-Attestation) ತಂತ್ರಾಂಶದ ಮೂಲಕ ದಾಖಲೆಗಳನ್ನು ಪಡೆಯುವುದು, ಪ್ರತಿಯೊಂದು ಕಾಲೇಜು/ಶಿಕ್ಷಣ ಸಂಸ್ಥೆಯಲ್ಲಿ ದಾಖಲೆಗಳನ್ನು ದೃಢೀಕರಣ ಮಾಡಲು ಅಧಿಕಾರಿಗಳನ್ನು ನೇಮಿಸಲಾಗುವುದು, ಇದು ಜವಬ್ದಾರಿ ಗುರುತಿಸಲು ಪೂರಕವಾಗಿದೆ "** ಎಂದು ತಿಳಿಸಲಾಗಿರುತ್ತದೆ.

ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಇಂಜಿನಿಯರಿಂಗ್ ಕಾಲೇಜು/ವಿಶ್ವವಿದ್ಯಾಲಯಗಳು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರು **ವಿವಿಧ ಯೋಜನೆಗಳಾಡಿಯಲ್ಲಿ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ದಾಖಲೆಗಳನ್ನು ಇ-ದೃಢೀಕರಣ (e-Attestation) ಮಾಡಲು ಇಬ್ಬರು ಅಧಿಕಾರಿಗಳನ್ನು ಸೂಚಿಸಿ,** ಈ ಕಛೇರಿಗೆ ದಿನಾಂಕ: 20-07-2019ರ ಒಳಗಾಗಿ ಅಧಿಕಾರಿಗಳ ಮಾಹಿತಿಯ ಪಟ್ಟಿಯನ್ನು ಕೂಡಲೇ ಈ ಕೆಳಕಂಡ ಇ-ಮೇಲ್ ವಿಳಾಸಕ್ಕೆ ಕಳುಹಿಸಲು ಸೂಚಿಸಿದೆ.

E-Mail Id:- **dteschsection@gmail.com**

ಹಾಗೂ Hard Copy ಯನ್ನು ಸಹ **ಅತೀ ಜರೂರಾಗಿ** ಈ ಕಛೇರಿಗೆ ಸಲ್ಲಿಸಲು ಸೂಚಿಸಲಾಗಿದೆ.

Link to send Information through Google form

ನಿರ್ದೇಶಕರು
ಮೂ.ತಿ.ನೋ.



Attestation of Documents by Officer/10/19-20

**ಇವರಿಗೆ,**

1. ಪ್ರಾಂಶುಪಾಲರು, ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್‌ಗಳು – ಇವರ ಗಮನಕ್ಕಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
   **(ಈ ಸುತ್ತೋಲೆಯನ್ನು ವಿದ್ಯಾರ್ಥಿಗಳ ಮಾಹಿತಿ ಮತ್ತು ಗಮನಕ್ಕಾಗಿ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಲಾಗಿದೆ)**
2. ಪಿ.ಆರ್.ಓ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
3. ಸಂಯೋಜನಾಧಿಕಾರಿಯವರು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
4. ಹೆಚ್ಚುವರಿ ಪ್ರತಿ (ಕಡತಕ್ಕೆ).